◆ **ನೀವು–ರೋಹಿಣಿ ಅರ್ಧಶತಮಾನ ಜತೆಯಲ್ಲಿ ಒಟ್ಟಿಗೆ ಬದುಕಿದಿರಿ. ಇವರ ವ್ಯಕ್ತಿತ್ವ ಎಂಥದ್ದು?**

ನಮ್ಮ ರೋಹಿಣಿ ಮರದ ಮೌನದ ಹುಡುಗಿ. ಶಿ ನೆವರ್ ಕಂಪ್ಲೇಂಟ್ಸ್. ಎಂ.ಎ. ಫಿಲಾಸಫಿ ಗೋಲ್ಡ್ ಮೆಡಲ್ ತಗದಾಳ. ವೇದಾಂತ ಸ್ಪೆಶಲೈಜೇಶನ್. ಕಾನ್ವೊಕೇಶನ್ನಿಗೆ ಹಾಕ್ಕೊಳಕ್ಕ ಒಳ್ಳೇ ಅರಿವೆಯಿದ್ದಿಲ್ಲ. ಇಷ್ಟು ಉಪ್ಪಿಟ್ಟು ಕಟ್ಟಕೊಂಡು ಹೋಗಿ ಹಳ್ಳಳ್ಳಿ ಮನಿಮನಿ ಅಡ್ಡಾಡಿ ನೌಕರಿ ಮಾಡಿ ಹೈರಾಣಾಗ್ಯಾಳ. ನೀವ ವಿಚಾರ ಮಾಡ್ರಿ, ಸಣ್ಣ ಪಗಾರದೊಳಗ ನಾಲ್ಕು ಬಡಮಕ್ಕಳಿಗೆ ಎಂಜಿನಿಯರಿಂಗ್ ಓದಿಸ್ಯಾಳ, ಮಾಲ್‌ನ್ಯೂಟ್ರಿಶಿಯಸ್ ಮಕ್ಕಳಿಗೆ ಜೀವನ ಪರ್ಯಂತ ಔಷಧಿ ಕೊಡಿಸ್ಯಾಳ. ಆಕೀಗಿ ಜೀವನದೊಳಗ ಆಸೆಗಳೇ ಇಲ್ಲ. ನಮ್ಮ ಪರಿಚಿತರೊಬ್ಬರು ಗಯಾದೊಳಗಿದ್ದಾರ. ಅವರಿಗೆ ಹೇಳಿದ್ದೆ ಒಂದು ಬುದ್ಧನಮೂರ್ತಿ ತಂದುಕೊಡರಿ ಅಂತ. (ಪಕ್ಕದಲ್ಲಿದ್ದ ಮೂರ್ತಿ ತೋರಿಸುತ್ತ), ಇಗಾ ನೋಡ್ರಿ ತಂದುಕೊಟ್ಟಾರ. ಆದರೆ, ನಿಜವಾದ ಬುದ್ಧ ನನ್ನ ತಂಗಿ.

◆ **ನೀವೂ ಧಾರವಾಡದಲ್ಲಿ ಇಂಗ್ಲಿಷ್ ಎಂ.ಎ. ಮಾಡಿದಿರಿ.**

ಶಂಕರ ಮೊಕಾಶಿ ಪುಣೇಕರ್ ಎಲ್ಲಾ ಇದ್ರು. ಚಂಪಾ ಫೊನಿಟಿಕ್ಸ್ ಹೇಳ್ತಿದ್ದರು. ಹುಡಿಗ್ಯಾರಿಗೆ ಲವ್ ಪೊಯೆಮ್ಸ್ ಬರದಕೊಡ್ತಿದ್ರು. ಸಾಧನಾ ಅಂತ ಡಾಲ್ ಇದ್ದಂಗಿದ್ದಳು. ಆಕಿಗೆ ಒಂದಿವಸ ಲವ್ ಪೊಯೆಮ್ ಬರದಕೊಟ್ರು. ಅವಳು ನನಗ ತಂದ ತೋರಿಸಿದ್ಲು. 'ಸರ್ ಇಷ್ಟು ಚಂದ ಲವ್ ಪೊಯೆಮ್ ಬರದ ಕೊಟ್ಟೀರಿ' ಅಂದೆ. 'ಏ ಬಾಯರಿ, ನಿನಗ ಯಾರು ತೋರಿಸಿದ್ರು?' ಅಂದರು. 'ಸಾಧನಾ ತೋರಿಸದ್ದಳರಿ' ಅಂದೆ. ರವಿ ಬೆಳಗೆರೆ, ಜಯಂತ ಕಾಯ್ಕಿಣಿ ನಮಗ ಸೀನಿಯರ್ಸ್ ಇದ್ರು. ನಾನು ಭಾಳ ಇಂಗ್ಲಿಷ್ ಲಿಟರೇಚರ್ ಓದೀನ್ರಿ. ಬದಾಮಿಯೊಳಗ ನನಗ ಕಲಿಸಿದ ಯೋಗಪ್ಪನೋರು ನನ್ನ ಗ್ರಾಸ್ಪಿಂಗ್ ಪವರ್ ನೋಡಿ ಆಶ್ಚರ್ಯ ಪಡತಿದ್ದರು. ಓದೋದೇ ಅರ್ಧ ಕಣ್ಣು ಹೋಗ್ಯಾವರಿ.

◆ **ಪದವಿ ಯಾಕೆ ಮುಗಿಸಲಿಲ್ಲ?**

ಸುಟ್ಟ ಸುಡುಗಾಡ ಸ್ಕಿಜೊಫ್ರೇನಿಯಾ ಬಂದುಬಿಡ್ತು. ಇಪ್ಪತ್ತು ರೂಪಾಯಿ ಹಾಸ್ಟೆಲ್ ಬಿಲ್ ತುಂಬದೇ ಇದ್ದದ್ದಕ್ಕ ವಾರ್ಡನ್ ಹೊರಗ ಮಳಿಯೊಳಗ ನಿಲ್ಲಿಸಿಬಿಟ್ಟಳು. ಕೆಟ್ಟ ಬಡತನ. ಸ್ಪ್ಲಿಟ್ ಪರ್ಸನಾಲಿಟಿ ಆಗಿಬಿಡ್ತು. ಅದರಿಂದ ಹೊರಬರಬೇಕಾದರೆ ಹತ್ತು ವರ್ಷ ಹಿಡೀತೋ ಏನೊ. ಮನೀಗೆ ಬಂದರೆ ಕೂಳಿಲ್ಲ. ನಮ್ಮಪ್ಪಯ್ಯ ಸಾಧು ಸಂತರ ಹಿಂಬಾಲ. ಆಗ ನಮ್ಮಕ್ಕ ವಾಗ್ದೇವಿ, ಮನಿಮನಿ ಟೂಶನ್ ಹೇಳಿ ನಮ್ಮನ್ನ ಸಾಕಿದ್ಲು. ನಾವೂ ಟೂಶನ್ ಹೇಳ್ತಿದ್ವಿ.

◆ **ಜಗತ್ತಿನ ಸಾಹಿತ್ಯ ಓದಿಕೊಂಡಿದ್ದೀರಿ. ನಿಮ್ಮಂತಹವರು ಲೆಕ್ಚರರಾಗಿದ್ದರೆ ವಿದ್ಯಾರ್ಥಿಗಳಿಗೆ ಉಪಯೋಗ ಆಗ್ತಿತ್ತು.**

ಹಳಹಳಿಕೆ ಅದೇರಿ. ಏನು ಮಾಡ್ಲಿ? ಥೈರಾಯ್ಡ್ ಆಗಿ ಧ್ವನಿಪೆಟ್ಟಿಗೆ ಹೋಗಿಬಿಡ್ತು. ಈಗಲೂ ಮನೀಗೆ ಬಂದೋರು ಒಂದು ಒಜ್ಜೆ ಮಾತಾಡಿದರೆ, ನಿದ್ದಿ ಬರೋದಿಲ್ರಿ. ಓಣ್ಯಾಗ ಒಂದು ನಾಯಿಸತ್ತರೆ ಎಂಟು ದಿನ ನಿದ್ದಿ ಮಾಡೋದಿಲ್ಲ. ಆದರೆ, ನನ್ನ ಶಿಷ್ಯರು ಇಂಗ್ಲೆಂಡು ಅಮೆರಿಕ ಸೇರಿಕೊಂಡಾರ. ಇಂಗ್ಲಿಷಿನೊಳಗ ಬರೀತಾರ. ನನಗೆ ತೃಪ್ತಿ ಅದ. (ರೋಹಿಣಿ, 'ನಾನೂ ಅದೇ ಅಂತೀನ್ರಿ. ಎಂ.ಎ. ಮುಗಿಸಿದ್ದರೆ ಅವಳ ಜೀವನಾನೇ ಚೇಂಜ್ ಆಗಿಬಿಡ್ತಿತ್ತು' ಎಂದು ಸೇರಿಸಿದರು).

◆ **ನಿಮ್ಮ ಅಕ್ಕನವರ ಸಂಗೀತದ ಅಭಿರುಚಿ ಬಗ್ಗೆ ಫೋನಿನಲ್ಲಿ ಬಹಳ ಸಲ ಹೇಳಿದೀರಿ.**

ಆಕಿ ತೀರ್ಥಹಳ್ಳಿ ಹತ್ತರ ಒಂದು ಹಳ್ಳಿಯೊಳಗಿದ್ದಳು. ಗಟ್ಟಿಗಿತ್ತಿ. ಗಂಡ ಆಕ್ಸಿಡೆಂಟಿನೊಳಗ